O.S. 70/2014
D.W. 5_Seenappa

(ಸಾಕ್ಷಿಯನ್ನು ದಿನಾಂಕ 06.06.2022 ರಂದು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು)

**ಮುಖ್ಯ ವಿಚಾರಣೆಃ ಶ್ರೀ ಸಿ.ಎಸ್.ಸಿ ವಕೀಲರಿಂದಃ**

ನಾನು ಈ ದಾವೆಯಲ್ಲಿ 26 ನೇ ಪ್ರತಿವಾದಿ ಇರುತ್ತೇನೆ. ನಾನು ಈ ದಿನ ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿ ನಮೂದಿಸಿರುವ ಎಲ್ಲಾ ಅಂಶಗಳು ಸರಿಯಾಗಿರುತ್ತವೆ ಮತ್ತು ಸತ್ಯವಾಗಿರುತ್ತವೆ. ಇದನ್ನು ನಾನೇ ಹೇಳಿ ಬರೆಯಿಸಿ ನನ್ನ ಸಹಿಯನ್ನು ಮಾಡಿರುತ್ತೇನೆ.

ಮೂರು ಕಂದಾಯ ಪಾವತಿ ರಶೀದಿಯನ್ನು ಹಾಜರುಪಡಿಸಿದ್ದು ಕ್ರಮವಾಗಿ ನಿ.ಡಿ.94 ರಿಂದ 96 ಎಂದು, ದಿನಾಂಕಃ 02.02.1998 ರ ಅಸಲು ಕ್ರಯ ಪತ್ರವನ್ನು ಹಾಜರುಪಡಿಸಿದ್ದು ನಿ.ಡಿ.97 ಎಂದು, ಒಂದು ಆಸ್ತಿ ತೆರಿಗೆ ರಿಜಿಸ್ಟರ್ ಅನ್ನು ಹಾಜರುಪಡಿಸಿದ್ದು ನಿ.ಡಿ.98 ಎಂದು ಗುರುತಿಸಲಾಯಿತು.

ಆದುದ್ದರಿಂದ ನಾನು ಕೋರಿರುವಂತೆ ಈ ದಾವೆಯನ್ನು ವಜಾ ಮಾಡಬೇಕೆಂದು ಕೋರುತ್ತೇನೆ.

**ಪಾಟೀ ಸವಾಲುಃ ವಕೀಲರು ಸಮಯವಕಾಶವನ್ನು ಕೋರಿದ್ದು ನೀಡಲಾಯಿತು.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಗಿದೆ.)

ಓ.ಹೇ.ಕೇ. ಸರಿ ಇದೆ

*ಸಹಿ/-*
ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ,
ಕುಣಿಗಲ್.